**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಾ. ಕೆ ಗೋವಿಂದರಾಜ್ ಇವರು ಗಮನ ಸೆಳೆಯುವ ನಿಯಮ 330ಕ್ಕೆ ಪತ್ರಕ್ಕೆ ಉತ್ತರ.**

**ಪ್ರಶ್ನೆ**

ರಾಜ್ಯದ ಸರ್ಕಾರಿ ಶಾಲೆಗಳೂ ಸೇರಿದಂತೆ ಖಾಸಗಿ ಅನುದಾನಿತ ಶಾಲೆಗಳು ಮತ್ತು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದೈಹಿಕ ಬೆಳವಣಿಗೆ ಮತ್ತು ಕ್ರೀಡೆಯಲ್ಲಿ ಸಾಧಿಸುವ ಛಲ ಮತ್ತು ಆಸಕ್ತಿ ಇರುವ ವಿದ್ಯಾರ್ಥಿಗಳು ಇದ್ದಾರೆ. ಆದರೆ ಅವರ ಸರ್ವತೋಮುಖ ಬೆಳವಣಿಗೆಗೆ ಮತ್ತು ಕ್ರೀಡ ಆಸಕ್ತಿಗೆ ತಕ್ಕಂತಹ ವಾತಾವರಣ ಮತ್ತು ಮೂಲಭೂತ ಸೌಲಭ್ಯಗಳು ಮತ್ತು ಕ್ರೀಡಾ ತರಬೇತಿದಾರರು, ದೈಹಿಕ ಶಿಕ್ಷಕರ ಕೊರತೆ ಎದ್ದು ಕಾಣುತ್ತಿದೆ. ಹೀಗಾಗಿ ಆಸಕ್ತಿ ಮತ್ತು ಸಾಮರ್ಥ್ಯ ಇರುವ ವಿದ್ಯಾರ್ಥಿಗಳನ್ನು ಉತ್ತೇಜಿಸುವ ಕಾರ್ಯ ಆಗಬೇಕಾಗಿದೆ. ಶಾಲಾ ಮಟ್ಟದಲ್ಲೇ ಕ್ರೀಡೆ ಮತ್ತು ದೈಹಿಕ ಚಟುವಟಿಕೆಗಳಲ್ಲಿ ಆಸಕ್ತಿ ಬೆಳೆಸಿದ್ದಲ್ಲಿ ಮುಂದಿನ ದಿನಗಳಲ್ಲಿ ಅವರಿಂದ ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಿನ ಪ್ರಗತಿಯ ನಿರೀಕ್ಷೆಗಳನ್ನು ಕಾಣಬಹುದಾಗಿದೆ. ಈಗಾಗಿ ದೈಹಿಕ ಶಿಕ್ಷಣ ತರಬೇತಿ ಪಡೆದಿರುವ ಉದ್ಯೋಗಾಂಕ್ಷಿಗಳನ್ನು ಈ ನಿಟ್ಟಿನಲ್ಲಿ ಶಾಲಾ/ಕಾಲೇಜುಗಳಲ್ಲಿ ನೇಮಕ ಮಾಡುವುದರಿಂದ ಗುಣಮಟ್ಟದ ಕ್ರೀಡಾ ತರಬೇತಿಗೆ ಬುನಾದಿ ಹಾಕಿದಂತಾಗುತ್ತದೆ. ಇತ್ತೀಚಿನ ವರ್ಷಗಳಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಭಾರತೀಯ ಕ್ರೀಡಾಪಟುಗಳ ಸಾಧನೆ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಪ್ರದರ್ಶಿತವಾಗುತ್ತಿರುವ ಕ್ರೀಡಾಪಟುಗಳ ಪಾಲ್ಗೊಳ್ಳುವಿಕೆಯನ್ನು, ಅವರ ಸಾಧನೆಯ ಪರಿಶ್ರಮವನ್ನು ಮೆಚ್ಚಬೇಕಾಗುತ್ತದ. ಹೀಗಾಗಿ ಇಂತಹ ಸಾಧನೆ ಮುಂದಿನ ದಿನಮಾನಗಳಲ್ಲಿ ಮುಂದುವರೆಯಲು ಮತ್ತು ಇನ್ನೂ ಹೆಚ್ಚಿನ ಸಾಧನೆಯ ನಿರೀಕ್ಷೆ ಇಟ್ಟುಕೊಳ್ಳಲು ಶಾಲಾ, ಕಾಲೇಜು ಹಂತದಲ್ಲಿಯೇ ಅವರಿಗೆ ಉತ್ತಮ ಕ್ರೀಡಾ ಶಿಕ್ಷಣದ ಅವಶ್ಯಕತೆ ಇದೆ. ಹೀಗಾಗಿ ಸರ್ಕಾರವು ಈ ನಿಟ್ಟಿನಲ್ಲಿ ಗಂಭೀರವಾಗಿ ಯೋಚಿಸಿ ಈಗಾಗಲೇ ಕ್ರೀಡಾ ಶಿಕ್ಷಣ ತರಬೇತಿ ಪಡೆದ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಗೆ ತುರ್ತು ಆದ್ಯತೆ ನೀಡಬೇಕಾಗುತ್ತದೆ. ಇದೊಂದು ನಿರಂತರ ಪ್ರಕ್ರಿಯೆಯಾಗಿ ಮುಂದುವರೆಯಬೇಕಾಗುತ್ತದೆ. ಕ್ರೀಡಾ ಕ್ಷೇತ್ರದ ಬೆಳವಣಿಗೆಯ ಹಿತದೃಷ್ಠಿಯಿಂದ ಸಾರ್ವಜನಿಕ ಮಹತ್ವದ ಈ ವಿಷಯವನ್ನು ನಿಯಮ-330 ರಡಿ ಪ್ರಸ್ತಾಪಿಸಲು ಅನುಮತಿಸಬೇಕೆಂದು ಕೋರುತ್ತೇನೆ.

**ಉತ್ತರ**

**ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**

ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ 2120 ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿಗೆ ಅನುಮತಿ ನೀಡಲು ಕೋರಿದ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

**ಪ್ರೌಢ ಶಾಲೆಗೆ ಸಂಬಂಧಿಸಿದಂತೆ**

ಪ್ರಸ್ತುತ 200 ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇರ ನೇಮಕಾತಿ ಮೂಲಕ ತುಂಬಲು ಅನುಮತಿ ನೀಡಿದ್ದು, ಸದರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿರುತ್ತದೆ. **ಅನುದಾನಿತ ಪ್ರೌಢಶಾಲೆಗಳಲ್ಲಿನ** ಕರ್ನಾಟಕ ಶಿಕ್ಷಣ ಕಾಯ್ದೆ 1983 ನಿಯಮ 1999 ರ ಅನೆಕ್ಸರ್-4 ಸಿಬ್ಬಂದಿ ರಚನಾ ವಿನ್ಯಾಸದ ಪ್ರಕಾರ ಪ್ರತಿ ಅನುದಾನಿತ ಪ್ರೌಢಶಾಲೆಗೆ ಒಂದು ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-1 ಹುದ್ದೆಯನ್ನು ಅನುದಾನ ಸಹಿತವಾಗಿ ಅನುಮೋದಿಸಲಾಗುತ್ತಿದೆ. ದಿನಾಂಕ:31/05/2015 ರ ವರೆಗೆ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.

ಪದವಿ ಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿದ್ದು, ಈ ಹುದ್ದೆಗಳು ಖಾಲಿ ಇರುತ್ತವೆ, ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಈ ಪೈಕಿ 10 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ದಿ: 18-11-2021 ಹಾಗೂ ದಿ:30.04.2022 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ.

ಇನ್ನುಳಿದ 10 ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡುವ ಸಂಬಂಧ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಂದ ವ್ಯಕ್ತಿಪೂರ್ವೋತ್ತರ ದಸ್ತಾವೇಜುಗಳನ್ನು ಪಡೆದು ಪರಿಶೀಲಿಸಲು ಕ್ರಮವಹಿಸಲಾಗಿದೆ.

ಕರ್ನಾಟಕ ಪದವಿ ಪೂರ್ವ ಶಿಕ್ಷಣ (ಶೈಕ್ಷಣಿಕ, ನೋಂದಣಿ, ಆಡಳಿತ ಮತ್ತು ಅನುದಾನ ಸಂಹಿತೆ, ಮುಂತಾದವು) (ತಿದ್ದುಪಡಿ) ನಿಯಮಗಳು 2019 ರನ್ವಯ 120 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳ ಸಂಖ್ಯಾಬಲ ಹೊಂದಿರುವ 665 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿತ್ತು. ಆರ್ಥಿಕ ಇಲಾಖೆಯು ಕೋವಿಡ್-19ರ ಸಾಂಕ್ರಾಮಿಕ ರೋಗದ ಪರಿಣಾಮವಾಗಿ ಆರ್ಥಿಕ ನಿರ್ಬಂಧವಿರುವ ಹಿನ್ನೆಲೆಯಲ್ಲಿ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಸಾಧಿಸಬೇಕಾಗಿರುವುದರಿಂದ ಪ್ರಸ್ತುತ ಪ್ರಸ್ತಾವನೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ ಇಡಿ 43 ಟಿಪಿಯು 2018 ದಿನಾಂಕ: 09-10-2010 ರಂತೆ ಕರ್ನಾಟಕ ಪದವಿ ಪೂರ್ವ ಶಿಕ್ಷಣ (ಶೈಕ್ಷಣಿಕ, ನೋಂದಣಿ, ಆಡಳಿತ ಮತ್ತು ಅನುದಾನ ಸಂಹಿತೆ, ಮುಂತಾದವು) (ತಿದ್ದುಪಡಿ) ನಿಯಮಗಳು 2019ರನ್ವಯ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳಲ್ಲಿ ಒಟ್ಟು 120 ಮತ್ತು ಅದಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿರುವ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಒಂದು ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಯನ್ನು ಸಹಾಯಾನುದಾನಕ್ಕೆ ಒಳಪಡಿಸಲು ಅವಕಾಶ ಕಲ್ಪಿಸಿರುತ್ತದೆ.

ಪ್ರಸ್ತುತ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 524 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಮಂಜೂರಾಗಿದ್ದು, ಅದರಲ್ಲಿ 266 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಕಾರ್ಯನಿರ್ವಹಿಸುತ್ತಿರುತ್ತಾರೆ. ಬಾಕಿ ಇರುವ 258 ಹುದ್ದೆಗಳು ಖಾಲಿ ಇದ್ದು, ಇವುಗಳಲ್ಲಿ 63 ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಸರ್ಕಾರವು ಮಂಜೂರಾತಿ ನೀಡಿರುತ್ತದೆ. ಇನ್ನುಳಿದಂತೆ 120 ವಿದ್ಯಾರ್ಥಿಗಳ ಸಂಖ್ಯಾಬಲ ಹೊಂದಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಉಪನ್ಯಾಸಕರ ಹುದ್ದೆಯನ್ನು ಭರ್ತಿ ಮಾಡುವ ಸಂಬಂಧ ಆಡಳಿತ ಮಂಡಳಿಗಳಿಂದ ಪ್ರಸ್ತಾವನೆಗಳು ಸ್ವೀಕೃತಗೊಂಡ ನಂತರ ಈ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲು ಪರಿಶೀಲಿಸಲಾಗುವುದು.

ಇಪಿ 183 ಎಲ್‌ಬಿಪಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು

330-48